ಪೀಣ್ಯಾ ಕೈಗಾರಿಕಾ ಪ್ರದೇಶಕ್ಕೆ ಪ್ರತ್ಯೇಕವಾದ ಟೌನ್‌ಷಿಪ್ ಸ್ಥಾನಮಾನ ನೀಡುವ ಬಗ್ಗೆ

279 (546): ಶ್ರೀ ಸುರೇಶ್ ಕುಮಾರ್ ಎಸ್. (ರಾಜಾಜಿನಗರ) ಮಾನ್ಯ ಕಾರ್ಮಿಕ, ಸಣ್ಣ ಪ್ರಮಾಣದ ಕೈಗಾರಿಕೆ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪೀಣ್ಯ ಕೈಗಾರಿಕಾ ಪ್ರದೇಶಕ್ಕೆ ಪ್ರತ್ಯೇಕವಾದ ಟೌನ್‌ಷಿಪ್ ಸ್ಥಾನಮಾನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೆ?

ಆ) ಹಾಗಿದ್ದಲ್ಲಿ ಇದರಿಂದ ಈ ಪ್ರದೇಶಕ್ಕೆ ಆಗುವ ಅನುಕೂಲಗಳೇನು?

ಶ್ರೀ ಖಮರುಲ್ ಇಸ್ಲಾಂ (ಕಾರ್ಮಿಕ, ಸಣ್ಣ ಪ್ರಮಾಣದ ಕೈಗಾರಿಕೆ ಮತ್ತು ಹಜ್ ಸಚಿವರು):

ಅ) ಹೌದು.

ಆ) ಟೌನ್‌ಷಿಪ್‌ಗಳನ್ನು ಸ್ಥಾಪಿಸುವುದರಿಂದ ಆ ಪ್ರದೇಶದಲ್ಲಿ ಸ್ಥಾಪಿತವಾಗಿರುವ ಹಾಗೂ ಸ್ಥಾಪಿತಗೊಳ್ಳುವ ಕೈಗಾರಿಕೆಗಳ ಆರೋಗ್ಯಕರ ಬೆಳವಣಿಗೆ ಹಾಗೂ ಅಭಿವೃದ್ಧಿಗೆ ಸಹಕಾರಿಯಾಗುತ್ತದೆ. ಕೈಗಾರಿಕಾ ನಗರ ಪ್ರಾಧಿಕಾರಗಳನ್ನು (Industrial Township Authorities)ಗಳನ್ನು ಆ ಪ್ರದೇಶದ ಕೈಗಾರಿಕೋದ್ಯಮಿಗಳಿಂದಲೇ ಆಯ್ಕೆಗೊಂಡ ಪ್ರತಿನಿಧಿಗಳು ನಡೆಸುವುದರಿಂದ ಅಲ್ಲಿನ ಸಮಸ್ಯೆಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ಸಾಧ್ಯವಾಗುತ್ತದೆ. ಕರ್ನಾಟಕ ಮುನಿಸಿಪಾಲಿಟಿ ಆಕ್ಟ್ 1964ಕ್ಕೆ ತಿದ್ದುಪಡಿ ತಂದಿರುವುದರಿಂದ, ತಿದ್ದುಪಡಿ ಆದೇಶದ ಪ್ರಕಾರ ಕೈಗಾರಿಕಾ ನಗರ ಪ್ರಾಧಿಕಾರಗಳಿಗೂ ಸಹ ನಗರಸಭೆ, ಪುರಸಭೆಗಳಿಗೆ ಇರುವ ಅಧಿಕಾರ ವ್ಯಾಪ್ತಿ ಸಂಪೂರ್ಣವಾಗಿ ಹಸ್ತಾಂತರವಾಗುತ್ತದೆ. ಇದರಿಂದ ಆ ಪ್ರದೇಶಗಳಡಿ ಬರುವ ಭೂಮಿ, ಕಟ್ಟಡದ ಸೇತುವೆ, ಇತರೆ ಮೂಲಭೂತ ಸೌಕರ್ಯಗಳಿಗೆ ಸಂಬಂಧಪಟ್ಟಂತೆ ಎಲ್ಲಾ ತೆರಿಗೆಗಳನ್ನು ವಸೂಲಿ ಮಾಡುವ ಹಾಗೂ ಆ ಪ್ರದೇಶವನ್ನು ಅಭಿವೃದ್ಧಿಪಡಿಸುವ ಸಂಪೂರ್ಣ ಅಧಿಕಾರ ಈ ಕೈಗಾರಿಕಾ ನಗರ ಪ್ರಾಧಿಕಾರಕ್ಕೆ ಇರುತ್ತದೆ. ಈ ಅಥಾರಿಟಿಗೆ ಕರ್ನಾಟಕ ಮುನಿಸಿಪಾಲಿಟಿ ಕಾಯಿದೆಯನ್ವಯ ಮುನಿಸಿಪಲ್ ಕೌನ್ಸಿಲ್‌ಗೆ ಇರುವ ಅಧಿಕಾರವೆಲ್ಲವೂ ಇರುತ್ತದೆ. ಸಂಗ್ರಹಿಸಿದ ಆಸ್ತಿ ತೆರಿಗೆಯು ಶೆ. 30 ರಷ್ಟನ್ನು ಸ್ಥಳೀಯ ಪ್ರಾಧಿಕಾರಗಳಿಗೆ ನೀಡಿ ಉಳಿದಿರುವುದನ್ನು ಆಯಾ ಪ್ರದೇಶದ ಅಭಿವೃದ್ಧಿಗೆ ಬೇಕಾಗುವಂತೆ ಪ್ರಾಶಸ್ತ್ಯಕ್ಕನುಗುಣವಾಗಿ ವಿನಿಯೋಗಿಸಬಹುದಾಗಿದೆ.

ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಬಾಕಿ ಇರುವ ಸಬ್ಸಿಡಿ

280 (547): ಶ್ರೀ ಸುರೇಶ್ ಕುಮಾರ್ ಎಸ್. (ರಾಜಾಜಿನಗರ) ಮಾನ್ಯ ಕಾರ್ಮಿಕ, ಸಣ್ಣ ಪ್ರಮಾಣದ ಕೈಗಾರಿಕೆ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಬಾಕಿ ಇರುವ ಸಬ್ಸಿಡಿ ಹಣದ ಮೊತ್ತವೆಷ್ಟು;

ಆ) ಇದು ಎಂದಿನಿಂದ ಬಾಕಿ ಇದೆ;

ಇ) ಇದನ್ನು ಯಾವಾಗ ನೀಡಲಾಗುವುದು?

ಶ್ರೀ ಖಮರುಲ್ ಇಸ್ಲಾಂ (ಕಾರ್ಮಿಕ, ಸಣ್ಣ ಪ್ರಮಾಣದ ಕೈಗಾರಿಕೆ ಮತ್ತು ಹಜ್ ಸಚಿವರು)

ಅ) 31.03.2003ರ ವರೆಗೆ 18,279 ಸಣ್ಣ ಕೈಗಾರಿಕೆಗಳಿಗೆ ಒಟ್ಟು ರೂ. 40567.36 ಲಕ್ಷಗಳ ಸಹಾಯಧನ ಬಿಡುಗಡೆ ಬಾಕಿ ಇರುತ್ತದೆ.

ಆ) ದಿನಾಂಕ: 01.01.1999ರಿಂದ ಬಾಕಿ ಇದೆ.

ಇ) ಸಹಾಯಧನ ಬಿಡುಗಡೆಗಾಗಿ ಅಗತ್ಯ ಮೊತ್ತವನ್ನು ಕೆ.ಎಸ್. ಎಫ್.ಸಿ.ಬಾಂಡ್ ಮುಖಾಂತರ ಕ್ರೋಢೀಕರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ, ಹಾಗೂ ತದನಂತರ ಮಂಜೂರು ಮಾಡಲ್ಪಟ್ಟ ಘಟಕಗಳಿಗೆ, ಅವುಗಳಿಗೆ ಮಂಜೂರಾತಿ ನೀಡಿದ ದಿನಾಂಕದ ಜೇಷ್ಟತೆಯ ಆಧಾರದ ಮೇಲೆ ಬಿಡುಗಡೆ ಮಾಡಲಾಗುವುದು.

ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಬಿಸಿಎಂ ಹಾಸ್ಟೇಲ್ ತೆರೆಯುವುದು

281 (230): ಶ್ರೀ· ಸುರೇಶಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ದೊಡ್ಡ ಎಣ್ಣೆಗೆರೆ ಗೇಟ್ ಮತ್ತು ಶೆಟ್ಟಕೆರೆ ಗ್ರಾಮಗಳಲ್ಲಿ ಬಿಸಿಎಂ ಹಾಸ್ಟೆಲ್ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಈ ಗ್ರಾಮಗಳಲ್ಲಿ ಹಿಂದುಳಿದ ವರ್ಗಗಳ ಬಡ ವಿದ್ಯಾರ್ಥಿಗಳು ಹೆಚ್ಚಾಗಿರುವುದರಿಂದ ಹಾಸ್ಟೇಲು ತೆರೆಯಲು ಆದ್ಯತೆ ನೀಡಲಾಗುವುದೇ?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಇಲ್ಲ.

ಆ) ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ದೊಡ್ಡ ಎಣ್ಣೆಗೆರೆಗೇಟ್ ಮತ್ತು ಶೆಟ್ಟಕೆರೆ ಗ್ರಾಮಗಳಿಗೆ ಹೊಸ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವಂತೆ ಮನವಿಗಳು ಬಂದಿರುತ್ತವೆ. ಆದರೆ 2003–04 ರಲ್ಲಿ ಉತ್ತರಕರ್ನಾಟಕದ ಹಿಂದುಳಿದ 7 ಜಿಲ್ಲೆಗಳಲ್ಲಿ ಮಾತ್ರ ಹೊಸ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭ ಮಾಡುವ ಪ್ರಸ್ತಾಪವಿದ್ದು ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಈ ಗ್ರಾಮಗಳಿಗೆ ಆದ್ಯತೆ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ.

ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಪರಿಶಿಷ್ಟ ಜಾತಿ: ಪರಿಶಿಷ್ಟ ಪಂಗಡದ ಹಾಸ್ಟೆಲ್ ಪ್ರಾರಂಭ ಬಗ್ಗೆ

282 (231): ಶ್ರೀ ಸುರೇಶ್ ಬಾಬು ಸಿ.ಬಿ (ಚಿಕ್ಕನಾಯಕನಹಳ್ಳಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾ: ಕಾತ್ರಿಕಹಳ್ ಗ್ರಾಮದಲ್ಲಿ ಪರಿಶಿಷ್ಟ ಜಾತಿ: ಪಂಗಡದ ಹಾಸ್ಟೆಲ್ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಹಾಸ್ಟೆಲ್ ಮಂಜೂರು ಮಾಡಲು ಯಾವ ಕ್ರಮ ತೆಗೆದುಕೊಳ್ಳಲಾಗುತ್ತಿದೆ; ಮುಂದಿನ ಶೈಕ್ಷಣಿಕ ವರ್ಷ ಪ್ರಾರಂಭವಾಗುವುದರೊಳಗೆ ಹಾಸ್ಟೆಲ್ ಮಂಜೂರು ಮಾಡಲಾಗುವುದೇ?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಪರಿಶಿಷ್ಟ ಜಾತಿಯ ವಿದ್ಯಾರ್ಥಿನಿಲಯಕ್ಕೆ ಅರ್ಜಿ ಮನವಿಯನ್ನು ಸ್ವೀಕರಿಸಿರುವುದಿಲ್ಲ. ಪರಿಶಿಷ್ಟ ವರ್ಗದ ವಿದ್ಯಾರ್ಥಿನಿಲಯ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.